# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ -145ರ ವಾರ್ಡ್ ಸಭೆಯ ನಡವಳಿ

ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರದ ಹೊಂಬೇಗೌಡನಗರ ವಾರ್ಡ್–145 ರಲ್ಲಿ ವಾರ್ಡ್ ಸಭೆಯನ್ನು ಮಾನ್ಯ ಶ್ರೀಮತಿ. ಲಕ್ಷ್ಮೀದೇವಿ ಆರ್. ಉಪ ಆಯುಕ್ತರು ಕಂದಾಯ (ದಕ್ಷಿಣ), ನೋಡಲ್ ಅಧಿಕಾರಿ ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರ ಅಪ್ಪಣೆ ಮೇರೆಗೆ ದಿನಾಂಕ:11/05/2021 ರಂದು ಮಂಗಳವಾರ ಮಧ್ಯಾಹ್ನ 3.00 ಗಂಟೆಗೆ ವಾರ್ಡ್ ಕಮಿಟಿ ಸಭೆಯನ್ನು ಕರೆಯಲಾಗಿದ್ದು, ವಾರ್ಡ್ ಕುಂದು ಕೊರತೆಗಳ ಬಗ್ಗೆ ಚರ್ಚಿಸಲು Zoom Application Link ಮೂಲಕ ಸದಸ್ಯರಿಗೆ ಆಹ್ವಾನ ನೀಡಿದ್ದು, ಸಭೆಗೆ ಅಂತರ್ಜಾಲದ ಲಿಂಕ್ ಮುಖಾಂತರ ಹಾಜರಾಗಿರುವ ಎಲ್ಲರಿಗೂ ಸ್ವಾಗತ ಕೋರುತ್ತಾ, ಸಭೆಯ ವಾರ್ಡ್ ಸಮಿತಿ ಅಧ್ಯಕ್ಷರಾದ ಸನ್ಮಾನ್ಯ ಶ್ರೀಮತಿ. ಲಕ್ಷ್ಮೀದೇವಿ ರವರ ಅಧ್ಯಕ್ಷತೆಯೊಂದಿಗೆ ಸಭೆಯನ್ನು ನಡೆಸಲಾಯಿತು.

**ಹಾಜರಿದ್ದವರು:-**

1. ಉಪ ಆಯುಕ್ತರು (ದಕ್ಷಿಣ) ಹಾಗೂ ವಾರ್ಡ್ 145ರ ನೋಡಲ್ ಅಧಿಕಾರಿ.
2. ವಾರ್ಡ್ 145ಕ್ಕೆ ಸಂಬಂಧಪಟ್ಟಂತ AE,
3. ಪೊಲೀಸ್ ಸಿಬ್ಬಂದಿ ವರ್ಗದವರು ವಿಲ್ಸನ್ ಗಾರ್ಡನ್ ಠಾಣೆ.
4. ನಾಗರೀಕ ಕಲ್ಯಾಣ ಸಂಘದ ಸದಸ್ಯರು ಮತ್ತು ಸಾರ್ವಜನಿಕರು

*********

1. ಪ್ರಸ್ತುತ ಲಾಕ್‌ಡೌನ್ ಇದ್ದರೂ ಸಹ ವಿಲ್ಸನ್‌ಗಾರ್ಡನ್ 5ನೇ ಅಡ್ಡರಸ್ತೆಯಲ್ಲಿ ಹೂವಿನ ಅಂಗಡಿಗಳು ತೆರೆದಿರುವುದಾಗಿ ಸಾರ್ವಜನಿಕರು ದೂರಿದರು. ಸಂಬಂಧಿಸಿದಂತೆ ಪೊಲೀಸ್ ಇಲಾಖೆಯಿಂದ ಕ್ರಮ ಕೈಗೊಳ್ಳಲು ಸೂಚಿಸಲಾಯಿತು.
2. ಲಾಕ್‌ಡೌನ್ ಸಮಯದಲ್ಲಿ ಹೂವಿನ ಅಂಗಡಿಗಳಲ್ಲಿ ಅನೇಕ ಜನಗಳು ಗುಂಪು ಗುಂಪಾಗಿ ಸೇರಿ ಕೆಲಸ ನಿರ್ವಹಿಸಿರುತ್ತಾರೆ ಎಂದು ಸ್ಥಳೀಯರು ದೂರಿದರು. ಸಂಬಂಧಿಸಿದಂತೆ ಪೊಲೀಸ್ ಇಲಾಖೆಯಿಂದ ಕ್ರಮ ಕೈಗೊಳ್ಳಲು ಸೂಚಿಸಲಾಯಿತು.
3. Triage (ಚಿಕಿತ್ಸೆಯ ಸರದಿ ನಿರ್ಧಾರ) ಕೇಂದ್ರವನ್ನು ವಾರ್ಡ್‌ನಲ್ಲಿ ನಿರ್ಮಿಸುವ ಬಗ್ಗೆ ಚರ್ಚಿಸಲಾಯಿತು ಶ್ರೀ. ಸುಭಾಷ್ ರವರು ಈ ಬಗ್ಗೆ ಸ್ಪಂದಿಸಿ ಸಹಕಾರ ನೀಡುವ ಬಗ್ಗೆ ತಿಳಿಸಿದರು. ವಾರ್ಡಿನ ಹೆರಿಗೆ ಆಸ್ಪತ್ರೆಯನ್ನು Triage ಕೇಂದ್ರವನ್ನಾಗಿ ಈಗಾಗಲೇ ಪರಿವರ್ತಿಸಲಾಗಿದೆ.
4. ವಾರ್ಡ್‌ನ ವಾಕ್ಸಿನೇಷನ್ ಬಗ್ಗೆ ಚರ್ಚಿಸಲಾಯಿತು. ಹೆಚ್ಚಿನ ಪ್ರಾಶಸ್ತ್ಯವನ್ನು ವಾರ್ಡಿನ ಜನರಿಗೆ ನೀಡಲು ಕೋರಿದರು.

5. ವಾರ್ಡಿನ ರಸ್ತೆಗಳನ್ನು ಸ್ಯಾನಿಟೈಸೇಷನ್ ಮಾಡುವಂತೆ ಕೋರಿದರು. ಈಗಾಗಲೇ ವಾರ್ಡಿನ ಹಲವು ಭಾಗಗಳಲ್ಲಿ ಸ್ಯಾನಿಟೈಸೇಷನ್ ಕಾರ್ಯ ನಿರ್ವಹಿಸಿದ್ದು, ಮುಂದುವರೆಸಿಕೊಂಡು ಹೋಗಲಾಗುವುದು.
6. ಹರಿಲಕ್ಷ್ಮೀ ಥಿಯೇಟರ್ ಸುತ್ತಲೂ ಸ್ವಚ್ಛಗೊಳಿಸಲು ಕೋರಿದರು. ಸಂಬಂಧಿಸಿದಂತೆ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಗಮನ ಹರಿಸಲು ಸೂಚಿಸಲಾಯಿತು.
7. ಕೋವಿಡ್ ಟೆಸ್ಟಿಂಗ್ ಸೆಂಟರ್‌ಗಳನ್ನು ವಾರ್ಡಿನ ಬೇರೆ ಬೇರೆ ಪ್ರದೇಶಗಳಲ್ಲಿ ನಡೆಸಲು ಕೋರಿದರು. ಸಂಬಂಧಿಸಿದಂತೆ ಈಗಾಗಲೇ ಕ್ರಮ ಕೈಗೊಳ್ಳಲಾಗಿದ್ದು, ಹೆಚ್ಚು ಪಾಸಿಟೀವ್ ಕೇಸ್‌ಗಳು ಕಂಡು ಬಂದ ಪ್ರದೇಶಗಳಲ್ಲಿ ನಡೆಸಲು ಈಗಾಗಲೇ ಕ್ರಮ ಕೈಗೊಳ್ಳಲಾಗಿದೆ.
8. ಬೆಳಗ್ಗೆ 6.00 ರಿಂದ 10.00 ರವರೆಗೆ ವಾರ್ಡಿನ ವ್ಯಾಪಾರ ಪ್ರದೇಶಗಳಲ್ಲಿ ಸಾಮಾಜಿಕ ಅಂತರವನ್ನು ಕಾಯ್ದುಕೊಳ್ಳುತ್ತಿರುವುದಿಲ್ಲ ಎಂದು ದೂರಿದರು. ಸಭೆಗೆ ಹಾಜರಾಗಿದ್ದ ಪೋಲೀಸ್ ಅಧಿಕಾರಿಗಳು ಸಂಬಂಧಿಸಿದಂತೆ ಕ್ರಮ ಕೈಗೊಳ್ಳಲಾಗುವುದೆಂದು ತಿಳಿಸಿದರು.

ಮೇಲಿನ ಈ ಎಲ್ಲಾ ಚಟುವಟಿಕೆಗಳನ್ನು ಕ್ರಮಬದ್ಧವಾಗಿ ನಿರ್ವಹಿಸಲು ಎಲ್ಲಾ ಸಿಬ್ಬಂಧಿ ವರ್ಗದವರು ಒಂದುಗೂಡಿ ಈ ಕಾರ್ಯದಲ್ಲಿ ಪಾಲ್ಗೊಂಡು ಮಾನ್ಯ ಆಯುಕ್ತರು (ಬಿಬಿಎಂಪಿ) ರವರು ವಹಿಸಿರುವ ಜವಾಬ್ಧಾರಿಯನ್ನು ಯಶಸ್ವಿಯಾಗಿ ನಿರ್ವಹಿಸಲು ಎಲ್ಲರೂ ಸಹಕರಿಸಬೇಕೆಂದು ಹೇಳುತ್ತಾ ಸಭೆ ಮುಕ್ತಾಯಗೊಳಿಸಿದರು.

ಕಾರ್ಯದರ್ಶಿ ಹಾಗೂ
ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ – 145
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಅಧ್ಯಕ್ಷರು ಹಾಗೂ
ನೋಡಲ್ ಅಧಿಕಾರಿ
ವಾರ್ಡ್ ಸಂಖ್ಯೆ – 145
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ